# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈ.ವಿ:UG:2025-26:2670 ದಿನಾಂಕ:01.12.2025

## ಸುತ್ತೋಲೆ

ವಿಷಯ:- 2025-26ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಶೈಕ್ಷಣಿಕ ವೇಳಾಪಟ್ಟಿಯ ಕುರಿತು.

ಉಲ್ಲೇಖ:- 1. ವಿವಿ ಶೈಕ್ಷಣಿಕ ವೇಳಾಪಟ್ಟಿ ಅಧಿಸೂಚನೆ ಪತ್ರದ ಸಂಖ್ಯೆ: ಸಂಖ್ಯೆ: ತುವಿ: ಶೈವಿ:UG:CE: 2025-26/252 ದಿನಾಂಕ:02.05.2025.

2. ಸರ್ಕಾರದ ಆದೇಶ ಸಂ.ಇಡಿ 212 ಯುಎನ್ಇ 2024, ದಿನಾಂಕ:30.09.2025.
3. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಸಭಾ ದಿನಾಂಕ:17.10.2025.
4. ಸಂಖ್ಯೆ:ತುವಿ:ಶೈವಿ:UG:2025-26:2212 ದಿನಾಂಕ:23.10.2025
5. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:01.12.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (01)ರ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕ ಪದವಿಗಳ ಶೈಕ್ಷಣಿಕ ವೇಳಾಪಟ್ಟಿಯ ಅಧಿಸೂಚನೆಯಲ್ಲಿ 2025-26ನೇ ಶೈಕ್ಷಣಿಕ ಸಾಲಿನ ತರಗತಿಗಳ ಮುಕ್ತಾಯದ ದಿನಾಂಕ:10.12.2025ರ ವರೆಗೆ ನಿಗಧಿಪಡಿಸಲಾಗಿತ್ತು.

ಉಲ್ಲೇಖ (02)ರ ಸರ್ಕಾರದ ಆದೇಶ ಸಂಖ್ಯೆ:ಇಡಿ 212 ಯುಎನ್ಇ 2024, ಬೆಂಗಳೂರು ದಿನಾಂಕ:30.09.2025ರಲ್ಲಿ ತಿಳಿಸಿರುವಂತೆ 2025-26ನೇ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯ ಆದೇಶದಲ್ಲಿ ದಿನಾಂಕ:10.01.2026ರ ವರೆಗೆ ನಿಗಧಿಪಡಿಸಲಾಗಿದ್ದು, ಉಲ್ಲೇಖ (03)ರ ಪ್ರಾಂಶುಪಾಲರುಗಳ ಸಭೆಯಲ್ಲಿ ತೀರ್ಮಾನಿಸಿದಂತೆ ಬೆಸ ಸಂಖ್ಯೆಯ (Odd Semester) ಸೆಮಿಸ್ಟರ್‌ನ ತರಗತಿಗಳ ಮುಕ್ತಾಯದ ದಿನಾಂಕ:31.12.2025ಕ್ಕೆ ನಿಗಧಿಪಡಿಸುವಂತೆ ಉಲ್ಲೇಖ (04)ರ ಪತ್ರದಲ್ಲಿ ಸರ್ಕಾರವನ್ನು ಕೋರಲಾಗಿದ್ದು, ಸರ್ಕಾರದಿಂದ ನಿರ್ದೇಶನವು ಇನ್ನೂ ಬರಬೇಕಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಸರ್ಕಾರದ ನಿರ್ದೇಶನ ಕಾಯ್ದಿರಿಸಿ **ದಿನಾಂಕ:31.12.2025**ರ ವರೆಗೆ 2025-26ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯ ಬೆಸ ಸೆಮಿಸ್ಟರ್‌ನ (Odd Semester) ಕೊನೆಯ ದಿನಾಂಕವನ್ನು ನಿಗದಿಪಡಿಸಿದ್ದು, ಸದರಿ ಅವಧಿಯವರೆಗೆ ಶೈಕ್ಷಣಿಕ ಚಟುವಟಿಕೆಗಳನ್ನು ನಿರ್ವಹಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಮುಂದುವರೆದು, ಸರ್ಕಾರದಿಂದ ನಿರ್ದೇಶನ ಬಂದ ನಂತರ 2025-26ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯ ಸಂಬಂಧ ಸೂಕ್ತ ಮಾಹಿತಿಯನ್ನು ನೀಡಲಾಗುವುದು.

ಆದೇಶದ ಮೇರೆಗೆ,

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಪ್ರಾಂಶುಪಾಲರುಗಳು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು
2. ಪ್ರಾಂಶುಪಾಲರುಗಳು ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು
6. ಕಛೇರಿ ಪ್ರತಿ.